# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2198
ಸದಸ್ಯರ ಹೆಸರು : ಡಾ. ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ)
ಉತ್ತರಿಸುವ ದಿನಾಂಕ : 18.03.2022.
ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಕೋಲಾರ ಜಿಲ್ಲೆಯ ಶ್ರೀನಿವಾಸಪುರ ತಾಲ್ಲೂಕಿನ ಅರಿಕುಂಟೆ ಗ್ರಾಮ ಪಂಚಾಯಿತಿಯಲ್ಲಿ ಕಳೆದ 5 ವರ್ಷಗಳಿಂದ ಕೈಗೆತ್ತಿಕೊಂಡಿರುವ ಯೋಜನೆಗಳು ಯಾವುವು; | ಕೋಲಾರ ಜಿಲ್ಲೆಯ ಶ್ರೀನಿವಾಸಪುರ ತಾಲ್ಲೂಕಿನ ಅರಿಕುಂಟೆ ಗ್ರಾಮ ಪಂಚಾಯಿತಿಯಲ್ಲಿ ಕಳೆದ 5 ವರ್ಷಗಳಿಂದ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ, ವಿವಿಧ ವಸತಿ ಯೋಜನೆ, ಸ್ವಚ್ಛ ಭಾರತ ಮಿಷನ್, ಜಲಜೀವನ್ ಮಿಷನ್, 14/15ನೇ ಹಣಕಾಸು ಯೋಜನೆಗಳನ್ನು ಕೈಗೆತ್ತಿಕೊಂಡಿರುತ್ತವೆ. |
| (ಆ) | ಸದರಿ ಪಂಚಾಯಿತಿಯಲ್ಲಿ ವಸತಿ ಯೋಜನೆ ಅಡಿಯಲ್ಲಿ ಹಾಗೂ ಇತರೆ ಯೋಜನೆಗಳಲ್ಲಿ ಆಗಿರುವ ಅಕ್ರಮಗಳು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| (ಇ) | ಸದರಿ ಪಂಚಾಯಿತಿಯಲ್ಲಿ ವಿಡಿಯೋ ಹಾಗೂ ಕಂಪ್ಯೂಟರ್ ಸಿಬ್ಬಂದಿಗಳು ಶಾಮೀಲಾಗಿ ಸರ್ಕಾರದ ಹಣವನ್ನು ದುರ್ಬಳಕೆ ಮಾಡಿಕೊಂಡಿರುವ ಬಗ್ಗೆ ಕೋಲಾರ ಜಿಲ್ಲಾ ಪಂಚಾಯತ್ ವರದಿ ತರಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | |
| (ಈ) | ಬಂದಿದ್ದರೆ, ಈ ಸಿಬ್ಬಂದಿಗಳ ಮೇಲೆ ಕ್ರಮಕೈಗೊಳ್ಳದಿರಲು ಸರ್ಕಾರಕ್ಕೆ ಇರುವ ಅಡಚಣೆಗಳು ಏನು? (ಮಾಹಿತಿ ಒದಗಿಸುವುದು) | 2015-16ನೇ ಸಾಲಿನಲ್ಲಿ ಡಾ: ಬಿ.ಅರ್. ಅಂಬೇಡ್ಕರ್ ಆವಾಸ್ ಯೋಜನೆಯಡಿಯಲ್ಲಿ ಶ್ರೀಮತಿ ಪದ್ಮಮ್ಮ ಕೋಂ ನಾರಾಯಣಸ್ವಾಮಿ ಮತ್ತು ಶ್ರೀಮತಿ ಸಲ್ಲಾಪುರಮ್ಮ ಕೋಂ ಮುನಿಸ್ವಾಮಿ ರವರಿಗೆ 2 ಮನೆಯನ್ನು ಮಂಜೂರು ಮಾಡಿರುವುದಕ್ಕೆ ಸಂಬಂಧಿಸಿದಂತೆ ಆರೋಪಗಳ ಬಗ್ಗೆ ಮತ್ತು ಅರಿಕುಂಟೆ ಗ್ರಾಮ ಪಂಚಾಯತಿ ಗಣಕಯಂತ್ರ ನಿರ್ವಾಹಕರಾದ ಶ್ರೀ ಮುನಿಕದಿರಪ್ಪ ರವರು 2008-09ನೇ ಸಾಲಿನಲ್ಲಿ ಅವರ ಅತ್ತಿಗೆಯಾದ ಶ್ರೀಮತಿ ಪದ್ಮಮ್ಮ ಕೋಂ ನಾರಾಯಣಸ್ವಾಮಿ ರವರ ಹೆಸರಿನಲ್ಲಿ ಆಶ್ರಯ ಯೋಜನೆಯಡಿಯಲ್ಲಿ ಅಕ್ರಮ ಎಸಗಿರುವ ಆರೋಪಗಳ ಬಗ್ಗೆ ತನಿಖೆ ಕೈಗೊಂಡು ತನಿಖಾ ವರದಿ ಸ್ವೀಕೃತವಾಗಿದ್ದು, ವಿಚಾರಣೆ ಹಂತದಲ್ಲಿರುತ್ತದೆ. |

ಸಂ. ಗ್ರಾಅಪ 128 ಗ್ರಾಪಂಅ 2022

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.